# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 725(838)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು

ವಿಷಯ : ಅಲಂಬಿಕ್ ಗ್ಲಾಸ್ ಕಾರ್ಖಾನೆ ನಿರ್ಮಾಣಕ್ಕೆ ಸರ್ಕಾರದಿಂದ ಭೂಮಿ ಮಂಜೂರು ಕುರಿತು

(ಅ) ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಅಲಂಬಿಕ್ ಗ್ಲಾಸ್ ಕಾರ್ಖಾನೆ ನಿರ್ಮಾಣಕ್ಕಾಗಿ ಸರ್ಕಾರದಿಂದ (ಕೆ.ಐ.ಎ.ಡಿ.ಬಿ) ಭೂಮಿಯನ್ನು ಮಂಜೂರು ಮಾಡಲಾಗಿದೆಯೇ; ಮಾಡಿದ್ದಲ್ಲಿ, ಎಷ್ಟು ಎಕರೆ ಭೂಮಿಯನ್ನು ಸರ್ಕಾರ ಮಂಜೂರು ಮಾಡಲಾಗಿದೆ; (ವಿವರ ನೀಡುವುದು)

(ಆ) ಈ ಹಿಂದೆ ಸದರಿ ಕಾರ್ಖಾನೆಯು ತನ್ನ ಕಾರ್ಮಿಕರ ಶ್ರೇಯೋಭಿವೃದ್ಧಿಯ ಪರವಾಗಿ ಕಾರ್ಮಿಕರಿಗೆ ವಾಸಿಸಲು ಮನೆ ಕಟ್ಟಿ ಕೊಡುವ ಉದ್ದೇಶದ ಸಲುವಾಗಿ ಸರ್ಕಾರದಿಂದ ಭೂಮಿಯನ್ನು ಮಂಜೂರು ಮಾಡಿಸಿಕೊಂಡಿದೆಯೇ; ಮಾಡಿಸಿಕೊಂಡಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು;

(ಇ) ಕಾರ್ಮಿಕರಿಗೆ ಮನೆ ಕಟ್ಟಿ ಕೊಡುವ ಉದ್ದೇಶದ ಸಲುವಾಗಿ ಸರ್ಕಾರದಿಂದ ಜಮೀನು ಪಡೆದು ಅನಂತರದಲ್ಲಿ ಬೇರೆ ಉದ್ದೇಶಕ್ಕಾಗಿ ಭೂಮಿಯನ್ನು ಬಳಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು? (ವಿವರ ನೀಡುವುದು)

(ಈ) ಈ ಕುರಿತು ಸರ್ಕಾರದ ಸುಧಾರಣೆಯ ಕ್ರಮವೇನು? (ವಿವರ ನೀಡುವುದು)